(60)

156ನೇ ಅ

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು, ಇವರ ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:60 ಕ್ಕೆ ಸರ್ಕಾರದ ಉತ್ತರ**

**ಸೂಚನೆ:**

"ರಾಜ್ಯದ 43 ಇಲಾಖೆಗಳಲ್ಲಿ ಒಟ್ಟಾರೆ 2.76 ಲಕ್ಷ (2,76,386) ಹುದ್ದೆಗಳು ಖಾಲಿ ಉಳಿದಿರುವುದಾಗಿ ಸರ್ಕಾರದ ಅಧಿಕೃತ ಮಾಹಿತಿಯಿಂದ ಗೊತ್ತಾಗಿದೆ. ಇದರಲ್ಲಿ 'ಎ' ದರ್ಜೆಯ 16,017 ಹುದ್ದೆಗಳು ಖಾಲಿ ಇದ್ದರೆ, 'ಬಿ' ದರ್ಜೆಯ 16,734, 'ಸಿ' ದರ್ಜೆಯ 1,66,021, 'ಡಿ' ದರ್ಜೆಯ 77,614 ಹುದ್ದೆಗಳು ಖಾಲಿಯಾಗಿವೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯೊಂದರಲ್ಲೇ 70,727 ಹುದ್ದೆಗಳು ಖಾಲಿ ಉಳಿದಿದೆ. ನಂತರದ ಸ್ಥಾನದಲ್ಲಿ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆ ಇದೆ. ಇಲ್ಲಿ 37,069 ಹುದ್ದೆಗಳು ಭರ್ತಿಯಾಗಬೇಕಿದೆ. ಈ ರೀತಿ ಎಲ್ಲಾ ಇಲಾಖೆಗಳಲ್ಲಿ ಹುದ್ದೆಗಳು ಖಾಲಿಯಿರುವುದರಿಂದ ಆಡಳಿತ ಮೇಲೆ ಒತ್ತಡ ಹೆಚ್ಚಾಗಿದ್ದು, ಸಾರ್ವಜನಿಕರ ದಿನನಿತ್ಯದ ಕೆಲಸ ಕಾರ್ಯಗಳಿಗೆ ತೊಡಕಾಗಿರುವುದರ ಕುರಿತು"

**ಉತ್ತರ:**

ರಾಜ್ಯದ ವಿವಿಧ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿ ಹುದ್ದೆಗಳನ್ನು ಸಾರ್ವಜನಿಕರ ಅಗತ್ಯತೆಗೆ ಅನುಗುಣವಾಗಿ ಭರ್ತಿ ಮಾಡಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿ, ಆರ್ಥಿಕ ಇಲಾಖೆಯಿಂದ ಅನುಮೋದಿತವಾದ ಹುದ್ದೆಗಳನ್ನು ಕಾಲಕಾಲಕ್ಕೆ ನಿಯಮಾನುಸಾರ ಕರ್ನಾಟಕ ಲೋಕಸೇವಾ ಆಯೋಗ/ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ. ಅದರ ಜೊತೆಗೆ, ಖಾಲಿ ಹುದ್ದೆಗಳ ಎದುರಾಗಿ ಅರ್ಹ ಸಿಬ್ಬಂದಿ / ಅಧಿಕಾರಿಗಳನ್ನು ಹೆಚ್ಚುವರಿ ಪ್ರಭಾರದಲ್ಲಿರಿಸಿ ಸಾರ್ವಜನಿಕರಿಗೆ ಸೇವೆಗಳನ್ನು ಒದಗಿಸಲು ಸಹ ಕ್ರಮವಹಿಸಲಾಗುತ್ತಿದೆ.

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳಿಂದ ಸಾರ್ವಜನಿಕರ ದಿನನಿತ್ಯದ ಕೆಲಸ ಕಾರ್ಯಗಳಿಗೆ ತೊಡಕಾಗದಂತೆ ಈಕೆಳಕಂಡ ಪರ್ಯಾಯ/ತಾತ್ಕಾಲಿಕ ಕ್ರಮಗಳನ್ನು ಕೈಗೊಳ್ಳಲಾಗಿದೆ

ಸಿಆಸು ಇಲಾಖೆ (ಆಡಳಿತ ಸುಧಾರಣೆ)ಯ ದಿನಾಂಕ: 26.07.2005ರ ಸುತ್ತೋಲೆ ಹಾಗೂ ಆರ್ಥಿಕ ಇಲಾಖೆಯ ದಿನಾಂಕ: 07-06-2024ರ ಸುತ್ತೋಲೆಗಳ ಅನ್ವಯ ಗ್ರೂಪ್-ಸಿ ವೃಂದದ ಕೆಲವು ಹುದ್ದೆಗಳನ್ನು (ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ವಾಹನ ಚಾಲಕರು ಮತ್ತು ಗ್ರೂಪ್-ಡಿ) ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ತಿಳಿಸಲಾಗಿದೆ. ಅದರಂತೆ, ಮಂಜೂರಾಗಿ ಖಾಲಿ ಇರುವ ಹುದ್ದೆಗಳ ಎದುರಾಗಿ ಅಂದಾಜು 96,844 ಹುದ್ದೆಗಳನ್ನು (ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ವಾಹನ ಚಾಲಕರು ಮತ್ತು ಗ್ರೂಪ್-ಡಿ ಸಮನಾಂತರ ಮತ್ತು ತಾಂತ್ರಿಕ ಹುದ್ದೆಗಳನ್ನು) ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಪಡೆದು ದಿನನಿತ್ಯದ ಕೆಲಸ ಕಾರ್ಯಗಳಿಗೆ ತೊಡಕಾಗದಂತೆ ಕಾರ್ಯನಿರ್ವಹಿಸಲಾಗುತ್ತಿದೆ.

**ಉನ್ನತ ಶಿಕ್ಷಣ ಇಲಾಖೆಯಡಿ** ಬರುವ ಸಂಸ್ಥೆ/ಸರ್ಕಾರಿ ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಮತ್ತು ಸರ್ಕಾರಿ ಇಂಜಿನಿಯರ್ ಕಾಲೇಜುಗಳಲ್ಲಿ **ಅತಿಥಿ ಉಪನ್ಯಾಸಕರ** ಸೇವೆಯನ್ನು ಮಾರ್ಚ 2026ರ ಅಂತ್ಯದವರೆಗೆ ಪಡೆಯಲು ಸರ್ಕಾರ ಅನುಮೋದನೆ ನೀಡಲಾಗಿದ್ದು, ವಿವರಗಳು ಈ ಕೆಳಕಂಡಂತಿದೆ :-

| ಕ್ರ. ಸಂ. | ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಸಂಸ್ಥೆ / ಕಾಲೇಜುಗಳ ವಿವರ | ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|
| 1) | ಸರ್ಕಾರಿ ಪಾಲಿಟೆಕ್ನಿಕ್ / ಕಿರಿಯ ತಾಂತ್ರಿಕ ಶಾಲೆಗಳಲ್ಲಿ | 1599 |
| 2) | ಸರ್ಕಾರಿ ಇಂಜಿನಿಯರ್ ಕಾಲೇಜುಗಳಲ್ಲಿ | 421 |

2024-25ನೇ ಸಾಲಿನಲ್ಲಿ ಪ್ರಸ್ತುತ ನೇಮಿಸಿಕೊಂಡಿರುವ **ಅತಿಥಿ ಉಪನ್ಯಾಸಕರ** ಮಾಹಿತಿಯು ಈ ಕೆಳಕಂಡಂತಿದೆ :

| | |
|---|---|
| 1. ಕಾಲೇಜು ಶಿಕ್ಷಣ ಇಲಾಖೆಯ ಪ್ರಥಮ ದರ್ಜೆ ಕಾಲೇಜುಗಳಲ್ಲಿ | 8371 |

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು** ಸರ್ಕಾರದ ಆದೇಶ ಸಂಖ್ಯೆ: ಇಪಿ 52 ಡಿಜಿಡಿ 2025, ದಿನಾಂಕ: 30.07.2025ರಲ್ಲಿ ರಾಜ್ಯದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ 2025-26ನೇ ಶೈಕ್ಷಣಿಕ ಅವಧಿಗೆ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹೆಚ್ಚುವರಿಯಾಗಿ ಒಟ್ಟು 819 **ಅತಿಥಿ ಉಪನ್ಯಾಸಕರ** ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ** ಸರ್ಕಾರದ ಆದೇಶ ಸಂಖ್ಯೆ: ಇಪಿ 138 ಎಸ್‌ಇಎಸ್ 2025, ದಿನಾಂಕ: 23.05.2025ರಲ್ಲಿ 2025-26ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರುಗಳ ಹುದ್ದೆಗಳಿಗೆ ಎದುರಾಗಿ ಶೈಕ್ಷಣಿಕ ಹಿತದೃಷ್ಟಿಯಿಂದ **ಅತಿಥಿ ಶಿಕ್ಷಕರುಗಳನ್ನು** ನೇರ ನೇಮಕಾತಿ ಮೂಲಕ ಶಿಕ್ಷಕರನ್ನು ಭರ್ತಿ ಮಾಡುವವರೆಗೆ ಅಥವಾ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಎಂಬ ಷರತ್ತಿಗೊಳಪಟ್ಟು ಈ ಕೆಳಕಂಡಂತೆ ಅತಿಥಿ ಶಿಕ್ಷಕರನ್ನು **ತಾತ್ಕಾಲಿಕವಾಗಿ** ನೇಮಕ ಮಾಡಿಕೊಳ್ಳಲು ಮಂಜೂರಾತಿ ನೀಡಲಾಗಿದೆ:-

| ಕ್ರ.ಸಂ | ಶಾಲೆಗಳ ವಿವರ | ಅತಿಥಿ ಶಿಕ್ಷಕರ ಸಂಖ್ಯೆ |
|---|---|---|
| 1 | ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ | 40,000 |
| 2 | ಸರ್ಕಾರಿ ಪ್ರೌಢಶಾಲೆಗಳಲ್ಲಿ | 11,000 |
| | ಒಟ್ಟು | 51,000 |

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ** ಖಾಲಿಯಿರುವ 337 ತಜ್ಞ ವೈದ್ಯ ಹುದ್ದೆಗಳನ್ನು ಮತ್ತು 250 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕೆಲವೊಂದು ಷರತ್ತುಗಳಿಗೊಳಪಟ್ಟು **ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು** ಆರ್ಥಿಕ ಇಲಾಖೆಯು ಅನುಮೋದನೆ ನೀಡಿರುತ್ತದೆ.

**ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ** 07 ವೈದ್ಯರುಗಳು ಹೊರಗುತ್ತಿಗೆ ಮೇಲೆ ಹಾಗೂ 56 ವೈದ್ಯರುಗಳು ಸಲಹಾ ವ್ಯವಸ್ಥೆಯ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ.

**(ಕಡತ ಸಂಖ್ಯೆ: ಸಿಆಸುಇ 209 ರಾಸ 2025)**

(ಸಿದ್ದರಾಮಯ್ಯ)
ಮುಖ್ಯಮಂತ್ರಿ